# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 496 |
| 2 ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 ಉತ್ತರಿಸುವ ದಿನಾಂಕ | : | 12.12.2024 |
| 4 ಉತ್ತರಿಸುವವರು | : | ಮಾನ್ಯ ಉಪ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | 2020ರಲ್ಲಿ ಕೌನ್ಸಿಲ್ ಅವಧಿ ಮುಗಿದ ನಂತರ ಬಿಬಿಎಂಪಿಗೆ ಚುನಾವಣೆ ನಡೆಸದಿರಲು ಕಾರಣಗಳೇನು; ವಾರ್ಡ್‌ಗಳ ವಿಂಗಡಣೆ ಕಾರ್ಯ ಪೂರ್ಣಗೊಂಡಿದೆಯೇ; ಹಾಗಿದ್ದರೆ ಚುನಾವಣೆ ವಿಳಂಬವಾಗಲು ಕಾರಣವೇನು; | • ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೌನ್ಸಿಲರ್‌ಗಳ ಸಂಖ್ಯೆಯನ್ನು 243 ಎಂದು ನಿಗದಿಪಡಿಸಿ ಹೊರಡಿಸಲಾಗಿದ್ದ ದಿನಾಂಕ:29.01.2021ರ ಅಧಿಸೂಚನೆಯನ್ನು ಹಿಂಪಡೆದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿನಿಯಮ, 2020ರ ಪ್ರಕರಣ 7ರನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೌನ್ಸಿಲರ್‌ಗಳ ಸಂಖ್ಯೆಯನ್ನು 225 (ಎರಡು ನೂರ ಇಪ್ಪತ್ತೈದು) ಎಂದು ದಿನಾಂಕ:04.08.2023ರ ಅಧಿಸೂಚನೆಯಲ್ಲಿ ನಿಗದಿಪಡಿಸಲಾಗಿರುತ್ತದೆ ಮತ್ತು 225 ವಾರ್ಡುಗಳಿಗೆ ಸಂಬಂಧಿಸಿದಂತೆ • ವಾರ್ಡುವಾರು ಕ್ಷೇತ್ರ ಪುನರ್ ವಿಂಗಡಣೆಯನ್ನು ಅಂತಿಮಗೊಳಿಸಿ ದಿನಾಂಕ:25.09.2023ರ ಅಧಿಸೂಚನೆ ಮತ್ತು ದಿನಾಂಕ:30.09.2023ರ ತಿದ್ದುಪಡಿ ಅಧಿಸೂಚನೆಗಳಲ್ಲಿ ಆದೇಶಿಸಲಾಗಿರುತ್ತದೆ.<br><br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಘನತ್ಯಾಜ್ಯ ನಿರ್ವಹಣೆ, ವಿಶ್ವದರ್ಜೆಯ ಮೂಲಸೌಕರ್ಯ ಒದಗಿಸುವುದು, ಪ್ರವಾಹ ನಿರ್ವಹಣೆ, ಸಾರ್ವಜನಿಕ ಸ್ಥಳಗಳ ಸರಿಯಾದ ಬಳಕೆ ಇತ್ಯಾದಿಗಳಂತಹ ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿರುವ ಸಂದರ್ಭಗಳಲ್ಲಿ ಉತ್ತಮ ನಾಗರಿಕ ಕೇಂದ್ರಿತ ವಿತರಣೆಗಳನ್ನು ಒದಗಿಸುವ ದೃಷ್ಟಿಯಿಂದ, ಬ್ರ್ಯಾಂಡ್ ಬೆಂಗಳೂರು ಹೆಸರಿನಲ್ಲಿ ಸುಸ್ಥಿರ ಮತ್ತು ಯೋಜಿತ ಅಭಿವೃದ್ಧಿಯನ್ನು ಖಾತ್ರಿಪಡಿಸುವ ಮೂಲಕ ಉತ್ತಮ ಗುಣಮಟ್ಟದ ಜೀವನವನ್ನು ಒದಗಿಸಿ ಬೆಂಗಳೂರು ನಗರವನ್ನು ಆದರ್ಶ ಜಾಗತಿಕ ತಾಣವಾಗಿ ಪರಿವರ್ತಿಸಲು, ಶ್ರೀ ಬಿ.ಎಸ್. ಪಾಟೀಲ್, ನಿವೃತ್ತ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಬ್ರ್ಯಾಂಡ್ ಬೆಂಗಳೂರು ತಜ್ಞರ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯ ಶಿಫಾರಸ್ಸನ್ನು ಆಧರಿಸಿ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ, |
| ಆ | ಮೀಸಲಾತಿ ಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೇ ಇಲ್ಲದಿದ್ದರೆ, ಅದನ್ನು ಯಾವಾಗ ಸಿದ್ಧಪಡಿಸಲಾಗುತ್ತದೆ; | |
| ಇ | ಪಾಲಿಕೆ ಚುನಾವಣೆ ವಿಳಂಬವಾಗುವುದನ್ನು ತಪ್ಪಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಡಿ-ಲಿಮಿಟೇಶನ್ ಮತ್ತು ಮೀಸಲಾತಿ ಪಟ್ಟಿಯನ್ನು ಸಿದ್ಧಪಡಿಸುವ ಜವಾಬ್ದಾರಿಯನ್ನು ಸರ್ಕಾರವು ಪರಿಗಣಿಸುತ್ತದೆಯೇ; ಹಾಗಿದ್ದಲ್ಲಿ, ಅದರ ವಿವರಗಳು, ಇಲ್ಲದಿದ್ದರೆ, ಅದಕ್ಕೆ ಕಾರಣಗಳೇನು; | |
| ಈ | ಬಿಬಿಎಂಪಿ ಚುನಾವಣೆಯನ್ನು ಯಾವಾಗ ನಡೆಸಲಾಗುವುದು? | |

| | | |
|---|---|---|
| | | 2024 ಅನ್ನು ದಿನಾಂಕ:25.07.2024 ರಂದು ಪರ್ಯಾಲೋಚನೆ ಹಾಗೂ ಅಂಗೀಕಾರಕ್ಕಾಗಿ ಕರ್ನಾಟಕ ವಿಧಾನ ಸಭೆಯಲ್ಲಿ ಮಂಡಿಸಲಾಗಿದೆ. ಚರ್ಚೆಯ ಸಂದರ್ಭದಲ್ಲಿ ವಿಧಾನ ಸಭೆಯ ಅನೇಕ ಸದಸ್ಯರುಗಳ ಕೋರಿಕೆಯ ಮೇರೆಗೆ, ಸದರಿ ವಿಧೇಯಕವನ್ನು ಸಮಗ್ರವಾಗಿ ಪರಿಶೀಲಿಸಿ ವರದಿಯನ್ನು ನೀಡಲು ವಿಧಾನ ಮಂಡಲ ಜಂಟಿ ಪರಿಶೀಲನಾ ಸಮಿತಿಯನ್ನು ರಚಿಸಲಾಗಿದೆ. ಪ್ರಸ್ತುತ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ, 2024 ಸದರಿ ಸಮಿತಿಯ ಪರಿಶೀಲನೆಯಲ್ಲಿರುತ್ತದೆ. ಅಂತಿಮಗೊಂಡ ನಂತರ ಅಗತ್ಯ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ: ನಅಇ 198 ಬಿಬಿಎಸ್ 2024 (ಇ)**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ